| |
|---|
| **Deposition Sheets (RP.No.57) Form No.4** |

**IN THE COURT OF PRL. CIVIL JUDGE & J.M.F.C., KARKALA.**

**Criminal Case No. 1560-2022**

ಪಿ.ಡಬ್ಲ್ಯು : 9 ಸಿ.ಡಬ್ಲ್ಯು : 7

ಸಾಕ್ಷಿದಾರನ ಹೆಸರು : ಅಜೇಯ ಶೆಟ್ಟಿ
ತಂದೆಯ ಹೆಸರು : ನಾರಾಯಣ ಶೆಟ್ಟಿ
ಪ್ರಾಯ : 34 ವರ್ಷ
ಉದ್ಯೋಗ : ಅಟೋ ಚಾಲಕ
ವಾಸ : ಅತ್ತೂರು, ಕಾರ್ಕಳ

ದಿನಾಂಕ 19-11-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಸಹಾಯಕ ಸರ್ಕಾರಿ ಅಭಿಯೋಜಕರು:-**

ಆರೋಪಿತರ ಪರಿಚಯವಿರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದಿರುವ 1 ಮತ್ತು 2ನೇ ಆರೋಪಿತರನ್ನು ನೋಡಿ ಗುರುತಿಸಿರುವುದಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ವ್ಯಕ್ತಿಯನ್ನು ದಸ್ತಗಿರಿ ಮಾಡಿರುವುದಿಲ್ಲ ಹಾಗೂ ಯಾವುದೇ ವ್ಯಕ್ತಿಗಳ ಪರಿಶೀಲನೆ ಮಾಡಿರುವುದಿಲ್ಲ ಹಾಗೂ ಯಾವುದೇ ವಾಹನವನ್ನು ಸ್ವಾಧೀನಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಯು ನಿಪಿ-11 ಮತ್ತು 12 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಗಳನ್ನು ನಿಪಿ-11(ಸಿ) ಮತ್ತು ನಿಪಿ-12(ಸಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಗಳನ್ನು ಸುಮಾರು 3 ವರ್ಷಗಳ ಹಿಂದೆ ಠಾಣೆಯಲ್ಲಿ ಹಾಕಿದ್ದು, ಯಾವ ಕಾರಣಕ್ಕೆ ಹಾಕಿರುತ್ತೇನೆ ಎಂದು ಗೊತ್ತಿರುವುದಿಲ್ಲ. ಪೋಲಿಸರು ಹೇಳಿದ ಮೇರೆಗೆ ಹಾಕಿರುತ್ತೇನೆ. ಸಾಕ್ಷಿಯು ನಿಪಿ-4 ರಿಂದ 7 ರ ದ್ವಿಚಕ್ರ ವಾಹನದ ಭಾವಚಿತ್ರಗಳನ್ನು ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

<u>ಪಾಟೀ ಸವಾಲು</u> ಃ **<u>ಸಹಾಯಕ ಸರ್ಕಾರಿ ಅಭಿಯೋಜಕರುಃ-</u>**

ದಿಃ 28-02-2022 ರಂದು ಪೋಲಿಸರು ನನ್ನನ್ನು ಕಾರ್ಕಳ ನಗರ ಠಾಣೆಗೆ ಬರಮಾಡಿಕೊಂಡು, ನನ್ನ ಸಮಕ್ಷಮ 1 ಮತ್ತು 2 ನೇ ಆರೋಪಿತರನ್ನು ದಸ್ತಗಿರಿ ಮಾಡಿ, ಅವರುಗಳನ್ನು ಪರಿಶೀಲನೆ ಮಾಡಿ, 1 ನೇ ಆರೋಪಿಯ ದ್ವಿಚಕ್ರ ವಾಹನವನ್ನು ಆರೋಪಿ ದಸ್ತಗಿರಿ ಮತ್ತು ಸೊತ್ತು ಸ್ವಾಧೀನತಾ ಮಹಜರು ಮುಖೇನ ಸ್ವಾಧೀನಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು</u> ಃ ಆರೋಪಿತರ ಪರ ಃ ಶ್ರೀ. ಎನ್.ಎಮ್.ಜೆ ವಕೀಲರಿಂದ ಃ

ನನ್ನನ್ನು ಕಾರ್ಕಳ ಗ್ರಾಮಾಂತರ ಠಾಣೆಯ ಪೋಲಿಸರು ಬರಲು ಹೇಳಿದ್ದು, ಅವರ ಹೆಸರು ಗೊತ್ತಿರುವುದಿಲ್ಲ.

ಮರುವಿಚಾರಣೆ ಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಕಾರ್ಕಳ